<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,</u>
<u>ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು</u>

**S.C. No. 196/2022**

| ಸಾಕ್ಷಿಯ ಹೆಸರು | ಶ್ರೀ. ಶಿವರಾಜ್ | ಚಾಸಾಃ | ಪ್ರಾಸಾಃ |
|---|---|---|---|
| ತಂದೆಯ ಹೆಸರು | ಜವರಯ್ಯ | 2 | 8 |
| ವಯಸ್ಸು | 40 ವರ್ಷ | ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು. ದಿನಾಂಕ **05.02.2026.** | |
| ಉದ್ಯೋಗ | ಪಿ.ಎಸ್.ಐ. ಶಾಸಕರ ಭವನ ಭದ್ರತೆ | | |
| ವಾಸ ಸ್ಥಳ | ಭಾರತ್ ನಗರ | | |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

1. ನಾನು ಮೇ 2021 ರಿಂದ ಫೆಬ್ರವರಿ 2024 ರವರೆಗೆ ಸೋಲದೇವನಹಳ್ಳಿ ಪೋಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಠಾಣೆಯಲ್ಲಿ ಕೆಲಸ ನಿರ್ವಹಿಸಿದ್ದೇನೆ. ದಿನಾಂಕ 22.06.2021 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಬೆಳಗಿನ ಜಾವ 2.30 ಗಂಟೆ ಸಮಯದಲ್ಲಿ ಚಾಸಾ. 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ಪಿರ್ಯಾದನ್ನು ಪಡೆದು ಆದರ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ 172/2021 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವ. ಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಾನು ಸ್ವೀಕರಿಸಿದ ದೂರನ್ನು ಈಗ ನೋಡುತ್ತಿದ್ದು ಅದನ್ನು ನಿಶಾನೆ.ಪಿ. 2 ಎಂತಲೂ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 2 (ಎ) ಎಂದು ಗುರುತಿಸಲಾಯಿತು. ಪ್ರ.ವ.ವ. ಅನ್ನು ನಿಶಾನೆ.ಪಿ. 3 ಎಂತಲೂ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 3 (ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಯನ್ನು ಪಿ.ಐ. ರವರಿಗೆ ನಿವೇದಿಸಿಕೊಂಡಿದ್ದೇನೆ.

2. ಅದೇ ದಿನ ಪಿ.ಐ. ರವರು ಆರೋಪಿ ಪತ್ತೆಗಾಗಿ ನನ್ನನ್ನು ಮತ್ತು ಚಾಸಾ. 11 ರವರನ್ನು ನೇಮಿಸಿದ್ದು ಅದರಂತೆ ದಿನಾಂಕ 23.06.2021 ರಂದು ನಾನು ಮತ್ತು ಚಾಸಾ. 11 ರವರು ಬೆಳಗಿನ ಗಸ್ತಿನಲ್ಲಿ ಆರೋಪಿತರು 8 ನೇ ಮೈಲಿ ಬಸ್ ನಿಲ್ದಾಣದಲ್ಲಿ ಇದ್ದಾರೆ ಎಂದು ಬಾತ್ಮಿದಾರರಿಂದ ಮಾಹಿತಿ ಬಂದಿದ್ದು ಅದರಂತೆ ಬೆಳಗ್ಗೆ 5.30 ಕ್ಕೆ 8 ನೇ ಮೈಲಿ ಬಸ್ ನಿಲ್ದಾಣಕ್ಕೆ ಹೋಗಿ ಅಲ್ಲಿ ಇದ್ದ ಕಾನೂನು ಸಂಘರ್ಷಕ್ಕೆ

ಒಳಗಾದ 3 ಬಾಲಕರನ್ನು ವಶಕ್ಕೆ ಪಡೆದುಕೊಂಡು ಪಿ.ಐ. ರವರ ಮುಂದೆ ಹಾಜರು ಪಡಿಸಿ ವರದಿಯೊಂದಿಗೆ ಕಾನೂನು ಸಂಘರ್ಷಕ್ಕೆ ಒಳಗಾದ 3 ಬಾಲಕರನ್ನು ಹಾಜರು ಪಡಿಸಿದ್ದೇನೆ. ಸಾಕ್ಷಿ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಶಾನೆ.ಪಿ. 4 ಎಂತಲೂ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 4 (ಎ) ಎಂತಲೂ ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಮಾಫಿ ಅರ್ಜಿ ಸಲ್ಲಿಸಿದ್ದು ವಿಚಾರಣಾ ಸಮಯದಲ್ಲಿ ಗೈರು ಹಾಜರು ಇರುತ್ತಾರೆ, ಆದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

<u>ಮರು ವಿಚಾರಣೆ ಇಲ್ಲ</u>

(ಈ ಸಾಕ್ಷಿದಾರರನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ವಿಚಾರಣೆ ಮಾಡಿದ್ದು ಅದನ್ನು ಯಥಾವತ್ತಾಗಿ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ,

**(ಶ್ರೀಮತಿ. ಬಿ.ಎಸ್.ರೇಖಾ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.